# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ.23 ರ ನಾಗವಾರಕ್ಕೆ ಸಂಬಂಧಿಸಿದಂತೆ ದಿನಾಂಕ: 04.06.2022 ರಂದು ಶ್ರೀ.ಇಮ್ರಾನ್.ಪಿ.ಎ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

**ಸಭೆಯಲ್ಲಿ ಹಾಜರಿದ್ದವರ ವಿವರ:-**

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ |
|---|---|---|
| 1 | ಶ್ರೀ.ಇಮ್ರಾನ್.ಪಿ.ಎ | ನೋಡಲ್ ಅಧಿಕಾರಿಗಳು ಮತ್ತು ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ.23 ನಾಗವಾರ |
| 2 | ಶ್ರೀ.ನಾಗರಾಜು | ಸಹಾಯಕ ಅಭಿಯಂತರರು & ಕಾರ್ಯದರ್ಶಿಗಳು ವಾರ್ಡ್ ಸಂಖ್ಯೆ.23 ನಾಗವಾರ |
| 3 | ಶ್ರೀ.ಸೈಯದ್ ಸಲೀಂ | ವಾರ್ಡ್ ಅಧ್ಯಕ್ಷರು |
| 4 | ಶ್ರೀ.ಸತೀಶ್.ಬಿ | ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 5 | ಶ್ರೀ.ಶ್ರೀರಾಮ್ | ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6 | ಶ್ರೀ.ಆರ್.ಮಂಜುನಾಥ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 7 | ಡಾ|| ಡೀಪ್ತಿ.ಡಿ | ವೈದ್ಯಾಧಿಕಾರಿಗಳು |
| 8 | ಶ್ರೀ.ರಾಯಪ್ಪ | ಹಿರಿಯ ಆರೋಗ್ಯ ಪರಿವೀಕ್ಷಕರು ಬಿ.ಬಿ.ಎಂ.ಪಿ |
| 9 | ಶ್ರೀ.ಸಂತೋಷ್ | ಕಿರಿಯ ಆರೋಗ್ಯ ಪರಿವೀಕ್ಷಕರು ಬಿ.ಬಿ.ಎಂ.ಪಿ |
| 10 | ಶ್ರೀ.ರಾಜಪ್ಪ.ಎಂ.ಎಲ್ | ಮಾರ್ಷಲ್ |
| 11 | ಶ್ರೀಮತಿ.ಉಮಾದೇವಿ | ಪಿ.ಹೆಚ್.ಸಿ ಕೆ.ಜಿ.ಹಳ್ಳಿ |
| 12 | ಶ್ರೀಮತಿ.ರೇಖಾವತಿ | ಆಶಾ ಕಾರ್ಯಕರ್ತೆ ಕೆ.ಜಿ.ಹಳ್ಳಿ |
| 13 | ಶ್ರೀ.ಶಿವಕುಮಾರ್.ಬಿ | ಸ್ಥಳೀಯರು / ಸದಸ್ಯರು |
| 14 | ಶ್ರೀ.ಸತೀಶ್‌ಕುಮಾರ್.ವಿ | ಸ್ಥಳೀಯರು / ಸದಸ್ಯರು |
| 15 | ಶ್ರೀ.ಇರ್ಫಾನ್ | ಸ್ಥಳೀಯರು / ಸದಸ್ಯರು |

ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಮತ್ತು ನೋಡಲ್ ಅಧಿಕಾರಿರವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸ್ವಾಗತಿಸುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1) ಆರೋಗ್ಯ ವೈದ್ಯಾಧಿಕಾರಿಗಳು:-** ವಾರ್ಡ್‌ನ ನಾಗವಾರ ಪ್ರದೇಶದಲ್ಲಿ ಶುಶ್ರೂಶಕರು ಹಾಗೂ ಆಶಾ ಕಾರ್ಯಕರ್ತೆಯರನ್ನು ಸರ್ಕಾರಿ ಶಾಲೆ, ಖಾಸಗಿ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಆರೋಗ್ಯ ತಪಾಸಣೆ ನಡೆಸಬೇಕೆಂದು ಹಾಗೂ ವಾರ್ಡ್‌ನ ವ್ಯಾಪ್ತಿಯಲ್ಲಿ ಫಾಗಿಂಗ್ ಮತ್ತು ಸ್ಪ್ರೇಯಿಂಗ್ ಸಿಂಪಡಿಸಬೇಕೆಂದು ಹಾಗೂ ಡೇಂಗ್ಯೂ ಜ್ವರದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ. ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆರೋಗ್ಯವೈದ್ಯಾಧಿಕಾರಿಗಳನ್ನು ನಿಯೋಜಿಸದೇ ಇಲ್ಲದೇ ಇರುವುದರಿಂದ ವಿಧವಾ ಪಿಂಚಣಿ ಮತ್ತು ವಯಸ್ಕರ ಪಿಂಚಣಿ ಸರಿಯಾಗಿ ಸಮರ್ಪಕವಾಗಿ ನಡೆಯುತ್ತಿಲ್ಲವೆಂದು ಸಭೆಯಲ್ಲಿ ತಿಳಿಸಿದರು.

**(ಕ್ರಮ:- ಆರೋಗ್ಯ ವೈದ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ಬಿ.ಬಿ.ಎಂ.ಪಿ)**

2) <u>ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಬಗ್ಗೆ (ಬಿ.ಡಬ್ಲ್ಯೂ.ಎಸ್.ಎಸ್.ಬಿ):-</u> ವಾರ್ಡ್ ವ್ಯಾಪ್ತಿಯ ವೀರಣ್ಣಪಾಳ್ಯ ಪ್ರದೇಶದಲ್ಲಿ ಮಳೆಗಾಲದಲ್ಲಿ ನೀರುನ ಕೊಳವೆಗಳಿಗೆ ಕಲುಷಿತ ನೀರು ಮಿಶ್ರಣಗೊಂಡು ಕುಡಿಯುವ ನೀರಿನ ಕೊಳವೆಗಳಲ್ಲಿ ಬರುವುದರಿಂದ ನೀರನ್ನು ಕುಡಿಯುವ ನೀರಿನ ಲ್ಯಾಬ್‌ಗೆ ಪರೀಕ್ಷಣೆ ನಡೆಸಲು ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ ಉಪ-ವಿಭಾಗ, ರವರ ವತಿಯಿಂದ ಸೂಕ್ತ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**<u>(ಕ್ರಮ :- ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ ಉಪ-ವಿಭಾಗ, ಕಲ್ಯಾಣನಗರ)</u>**

3) <u>ವಿದ್ಯುತ್ ವಿಭಾಗ:-</u> ವಾರ್ಡ್ ವ್ಯಾಪ್ತಿಯ ವೀರಣ್ಣಪಾಳ್ಯ ಸುತ್ತಮುತ್ತಲಿನ ಪ್ರದೇಶದಲ್ಲಿ ಬೀದಿದೀಪಗಳು ಸರಿಯಾಗಿ ನಿರ್ವಹಣೆಯಾಗದೇ ಇರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ. ಈ ಬಗ್ಗೆ ಸದರಿ ಪ್ರದೇಶದಲ್ಲಿ ಕೂಡಲೇ ವಿದ್ಯುತ್ ದೀಪಗಳನ್ನು ಅಳವಡಿಸಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ಗೋವಿಂದಪುರ ಮುಖ್ಯರಸ್ತೆ, ಗೋವಿಂದಪುರ ಪೋಲೀಸ್ ಠಾಣೆ ಹತ್ತಿರ ಕಂಬಗಳಿಂದ 5 ಅಡಿ ಎತ್ತರಕ್ಕೆ ತಂತಿಯನ್ನು ಅಳವಡಿಸಿರುತ್ತಾರೆ. ತಂತಿಗಳು ಕಟ್ಟಾಗಿ ಸಾರ್ವಜನಿಕರಿಗೆ ತೊಂದರೆಯಾಗುವುದಾಗಿ ತಿಳಿಸಿದರು.

ಈ ಬಗ್ಗೆ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ವಿಭಾಗ ರವರಿಗೆ ಕ್ರಮ ಕೈಗೊಳ್ಳಲು ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**<u>(ಕ್ರಮ :- ಕಾರ್ಯಪಾಲಕ ಅಭಿಯಂತರರು ವಿದ್ಯುತ್ ವಿಭಾಗ, 16ನೇ ಮಹಡಿ ಮೆಯೋಹಾಲ್, ಪಿ.ಯು.ಬಿ ಕಟ್ಟಡ)</u>**

4) <u>ಘನತ್ಯಾಜ್ಯ ನಿರ್ವಹಣೆ:-</u> ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಪಾಯಿಂಟ್‌ಗಳ ಹತ್ತಿರ ಆಟೋಗಳಲ್ಲಿ ಮತ್ತು ವಾಹನಗಳಲ್ಲಿ ಅಪರಿಚಿತರು ಕಸದ ರಾಶಿಯನ್ನು ಸುರಿಯುತ್ತಿದ್ದಾರೆ. ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುತ್ತಾರೆ.

ಈ ಬಗ್ಗೆ ಕಾರ್ಯಪಾಲಕ ಅಭಿಯಂತರರು ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ವಿಭಾಗ ರವರಿಗೆ ಕ್ರಮ ಕೈಗೊಳ್ಳಲು ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**<u>(ಕ್ರಮ :-ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗ ಬೆಂಗಳೂರು)</u>**

ಮೇಲ್ಕಂಡ ಎಲ್ಲಾ ಅಂಶಗಳು ಕಾರ್ಯರೂಪಕ್ಕೆ ಬಂದಿರುವ ಬಗ್ಗೆ ಹಾಗೂ ತೆಗೆದುಕೊಂಡಿರುವ ಕ್ರಮದ ಬಗ್ಗೆ ಮುಂದಿನ ಸಭೆಯಲ್ಲಿ ಚರ್ಚಿಸಲಾಗುವುದೆಂದು ತಿಳಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ವಂದನೆಗಳೊಂದಿಗೆ,**

ಶ್ರೀ.ನಾಗರಾಜು
ಕಾರ್ಯದರ್ಶಿಗಳು
ವಾರ್ಡ್ ಸಂಖ್ಯೆ.23 ನಾಗವಾರ

7/6/22
(ಶ್ರೀ.ಇಮ್ರಾನ್.ಪಿ.ವಿ)
ನೋಡಲ್ ಅಧಿಕಾರಿ & ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ.23 ನಾಗವಾರ

<u>ಪ್ರತಿಯನ್ನು:</u>

1. ಕೌನ್ಸಿಲ್ ಕಾರ್ಯದರ್ಶಿಗಳು ಬಿ.ಬಿ.ಎಂ.ಪಿ ಕೇಂದ್ರ ಕಛೇರಿರವರ ಅವಗಾಹನೆಗೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಪೂರ್ವ) ರವರಅವಗಾಹನೆಗಾಗಿ ಸಲ್ಲಿಸಿದೆ.
3. ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು (ಎಲೆಕ್ಟ್ರಿಕಲ್) ವಿದ್ಯುತ್ ವಿಭಾಗ, 16ನೇ ಮಹಡಿ, ಪಿ.ಯು.ಬಿ ಬಿಲ್ಡಿಂಗ್, ಮೆಯೋಹಾಲ್, ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
6. ಆರೋಗ್ಯ ವೈಧ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ,ಡಬ್ಲ್ಯೂ.ಎಸ್.ಎಸ್.ಬಿ ಕಲ್ಯಾಣನಗರ ಉಪ–ವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ–ವಿಭಾಗ ಬಿ.ಬಿ.ಎಂ.ಪಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10. ಕಛೇರಿಕಡತಕ್ಕೆ.